ಅ) ಕಿತ್ತೂರು ಪಟ್ಟಣಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ ಮಂಜೂರು ಯಾವಾಗ ಮಾಡಲಾಗುವುದು; ಅದರ ಅಂದಾಜು ವೆಚ್ಚವೆಷ್ಟು?

ಇ) ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಮಂಜೂರಾತಿ ನೀಡುವಲ್ಲಿ ತಾರತಮ್ಯವೇಕೆ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

889 (606): ಶ್ರೀ ಸುರೇಶ್ ಎಸ್. ಮಾರಿಹಾಳ್ (ಕಿತ್ತೂರು): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 2006–07ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ವಿಚಾರ ಸರ್ಕಾರಕ್ಕೆ ಇದೆಯೇ;

ಆ) ಕಿತ್ತೂರ ಕ್ಷೇತ್ರದಲ್ಲಿ ಪ್ರೌಢಶಾಲೆ ಮಂಜೂರಾತಿ ಕೋರಿ ಬಂದ ಪ್ರಸ್ತಾವನೆಗಳೆಷ್ಟು ; ಅವುಗಳ ವಿವರ ನೀಡುವುದು ;

ಇ) ಹಾಗಿದ್ದಲ್ಲಿ, ಮಂಜೂರಾತಿ ಯಾವಾಗ ನೀಡಲಾಗುವುದು.

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು);

ಅ) ಹೌದು.

ಆ) ಆರು ಪ್ರಸ್ತಾವನೆಗಳು ಬಂದಿದೆ. ಅವುಗಳ ವಿವರ ಕೆಳಕಂಡಂತಿದೆ.

1.	ಕೋದಾನಾಮರ	2.	ಸಂಪಗಾವ
3.	ಒಳೆಹೊಸೂರು	4.	ಬಾವಿಹಾಳ
5.	ಕಿತ್ತೂರು	6.	ಔರಾದ್

ಇ) ಶೈಕ್ಷಣಿಕ ಅಗತ್ಯತೆ ಹಾಗೂ ಆಯವ್ಯಯದ ಲಭ್ಯತೆಗನುಗುಣವಾಗಿ 2006–07ನೇ ಸಾಲಿನಲ್ಲಿ ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

890 (607): ಶ್ರೀ ಸುರೇಶ್ ಎಸ್. ಮಾರಿಹಾಳ್ (ಕಿತ್ತೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹೊಸದಾಗಿ ಆಯ್ಕೆಯಾದ ತಾಲ್ಲೂಕು ಪಂಚಾಯತ್ ಅಧ್ಯಕ್ಷ/ಉಪಾಧ್ಯಕ್ಷರ ಅಧಿಕಾರವೇನು;

ಅವರ ಅಧಿಕಾರವನ್ನು ಮೊಟಕುಗೊಳಿಸಲಾಗಿದೆಯೇ;

ಆ) ತಾಲ್ಲೂಕ್ ಪಂಚಾಯಿತಿಗಳಿಗೆ ಅನುದಾನವಿಲ್ಲವೆಂದು ಕಾಮಗಾರಿಗಳು ಸ್ಥಗಿತಗೊಂಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬೈಲಹೊಂಗಲ ತಾಲ್ಲೂಕ್ ಪಂಚಾಯತಿ ಅಧ್ಯಕ್ಷರಿಗೆ ವಾಹನವನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ವಾಹನವನ್ನು ನೀಡುವ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

ಅ) ತಾಲ್ಲೂಕು ಪಂಚಾಯತಿ ಅಧ್ಯಕ್ಷರ ಅಧಿಕಾರ ಮತ್ತು ಕರ್ತವ್ಯಗಳನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 152ರಲ್ಲಿ ವಿವರಿಸಲಾಗಿದೆ.

ತಾಲ್ಲೂಕು ಪಂಚಾಯತಿ ಉಪಾಧ್ಯಕ್ಷರ ಅಧಿಕಾರಗಳು ಮತ್ತು ಕರ್ತವ್ಯಗಳನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 153ರಲ್ಲಿ ವಿವರಿಸಲಾಗಿದೆ.

-ಇಲ್ಲ-

ಆ) ಇಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

891 (608): ಶ್ರೀ ಸುರೇಶ್ ಎಸ್. ಮಾರಿಹಾಳ್ (ಕಿತ್ತೂರು): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಿತ್ತೂರು ಮತ ಕ್ಷೇತ್ರದ ನಾವಲಗಟ್ಟಿ ಗ್ರಾಮದ ಹದ್ದಿನಲ್ಲಿ ತಿಗಡಿ ಹರನಾಲ ಯೋಜನೆಯಡಿಯಲ್ಲಿ ಹಿನ್ನೀರಿನಿಂದ ಮುಳುಗಡೆಯಾಗುವ ಬಾಕಿ ಉಳಿದ ಮನೆಗಳ ಭೂಸ್ವಾಧೀನ ಕುರಿತು ವಿಶೇಷ ಜಿಲ್ಲಾಧಿಕಾರಿಗಳು ಭೂಸ್ವಾಧೀನ ಹಾಗೂ ಪುನರ್ ವಸತಿ ಬೆಳಗಾವಿ ಇವರು ಸಲ್ಲಿಸಿದ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದಲ್ಲದೆ ಇವರು ನಾವಲಗಟ್ಟಿ ಗ್ರಾಮದ 198 ಮನೆಗಳು ಸಹ ಆರೋಗ್ಯ ದೃಷ್ಟಿಯಿಂದ ವಾಸಿಸಲು ಯೋಗ್ಯವಿಲ್ಲವೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ